ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ
"ಸಾರಿಗೆ ಭವನ" ಕೇಂದ್ರ ಕಛೇರಿ,
ಕೆ.ಹೆಚ್.ರಸ್ತೆ, ಶಾಂತಿನಗರ, ಬೆಂಗಳೂರು-560 027. ಭಾರತ
ದೂರವಾಣಿ : 080-22221321 / 22221325
ವೆಬ್-ಸೈಟ್ : www.ksrtc.in

Karnataka State Road Transport Corporation
"Transport House" Central Offices,
K.H.Road, Shanthinagar, Bangalore-560 027. India
Tel : 080-22221321 / 25
Website : www.ksrtc.in

ಸಂ.ಕರಾಸ:ಕೇಕ:ಆಡಳಿತ: ಸೇನಿ : 72 :2018-19 ದಿನಾಂಕ: 06-06-2018 07

## ಸುತ್ತೋಲೆ ಸಂಖ್ಯೆ: 1635

**ವಿಷಯ:** ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಕಾಯ್ದೆಯಲ್ಲಿ ಸೂಚಿಸಲಾದ ಖಾಯಿಲೆಗಳಿಂದ ಬಳಲುತ್ತಿದ್ದು, ಹುದ್ದೆಯ ಕರ್ತವ್ಯ ನಿರ್ವಹಿಸಲು ವೈದ್ಯಕೀಯವಾಗಿ ಅಸಮರ್ಥರಾದ ನೌಕರರನ್ನು ಪರ್ಯಾಯ ಹುದ್ದೆಗೆ ನಿಯೋಜಿಸುವ ಕುರಿತು.

**ಉಲ್ಲೇಖ:** ಸುತ್ತೋಲೆ ಸಂಖ್ಯೆ: 1491, ದಿನಾಂಕ:10-05-2013

- - -

ಮೇಲಿನ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಕಾಯ್ದೆಯಲ್ಲಿ ಸೂಚಿಸಲಾದ ಖಾಯಿಲೆಗಳಿಂದ ಬಳಲುತ್ತಿದ್ದು, ಪ್ರಸ್ತುತ ಹೊಂದಿರುವ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸಲು ವೈದ್ಯಕೀಯವಾಗಿ ಅಸಮರ್ಥರಾದ ನೌಕರರಿಗೆ ಪರ್ಯಾಯ ಹುದ್ದೆ ನೀಡುವ ಕುರಿತು ಉಲ್ಲೇಖಿತ ಸುತ್ತೋಲೆಯಲ್ಲಿ ಮಾರ್ಗದರ್ಶನ ನೀಡಲಾಗಿರುತ್ತದೆ.

ಉಲ್ಲೇಖಿತ ಸುತ್ತೋಲೆಯ ಅವಕಾಶದಂತೆ ಪರ್ಯಾಯ ಹುದ್ದೆ ಕೋರುವ ಪ್ರಕರಣಗಳಲ್ಲಿ ಕ.ರಾ.ರ.ಸಾ ನಿಗಮದ ಕೇಂದ್ರ ಕಛೇರಿ ಮಟ್ಟದಲ್ಲಿ ಪರಿಶೀಲಿಸಿ ಸೂಕ್ತ ಶಿಫಾರಸ್ಸು ಮಾಡಲು ಕೇಂದ್ರ ಕಛೇರಿ ಮಟ್ಟದಲ್ಲಿ ಸಮಿತಿಯನ್ನು ಈ ಕೆಳಕಂಡಂತೆ ರಚನೆ ಮಾಡಲಾಗಿದೆ.

1. ನಿರ್ದೇಶಕರು (ಸಿ &ಪ), ಅಧ್ಯಕ್ಷರು.
2. ಪ್ರಧಾನ ವ್ಯವಸ್ಥಾಪಕರು (ಸಿಬ್ಬಂದಿ), ಸದಸ್ಯರು.
3. ಮುಖ್ಯ ಕಾರ್ಮಿಕ ಕಲ್ಯಾಣಾಧಿಕಾರಿಗಳು, ಸದಸ್ಯರು.
4. ಮುಖ್ಯ ವೈದ್ಯಾಧಿಕಾರಿಗಳು, ಸದಸ್ಯರು.
5. ಉಪ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಸಂಚಾಲಕರು/ಸದಸ್ಯರು
6. ಪ್ರಧಾನ ವ್ಯವಸ್ಥಾಪಕ (ಸಂಚಾರ)/ಮುಖ್ಯ ಸಂಚಾರ ವ್ಯವಸ್ಥಾಪಕರು, ಸದಸ್ಯರು (ಚಾಲನಾ ಸಿಬ್ಬಂದಿಗಳಿಗೆ ಸಂಬಂಧಿಸಿದಂತೆ)
7. ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ)/ಮುಖ್ಯ ಯಾಂತ್ರಿಕ ಅಭಿಯಂತರರು (ನಿ), ಸದಸ್ಯರು. (ತಾಂತ್ರಿಕ ಸಿಬ್ಬಂದಿಗಳಿಗೆ ಸಂಬಂಧಿಸಿದಂತೆ)

ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಕಾಯ್ದೆ-2016 ರಲ್ಲಿ ಸೂಚಿಸಲಾದ ಖಾಯಿಲೆಗಳಿಂದ ಬಳಲುತ್ತಿರುವ ನೌಕರರು ಪರ್ಯಾಯ ಹುದ್ದೆ ಕೋರಿ ಸಲ್ಲಿಸುವ ಮನವಿಗಳನ್ನು ವಿಭಾಗ ಮಟ್ಟದಲ್ಲಿ ಪರಿಶೀಲಿಸಿ ಉಲ್ಲೇಖಿತ ಸುತ್ತೋಲೆಯ ಷರತ್ತುಗಳನ್ನು ಪೂರೈಸಿದ ಕುರಿತು ವೈದ್ಯಕೀಯ ದೃಢೀಕರಣ ಪತ್ರದೊಂದಿಗೆ ಮನವಿಗಳನ್ನು ವಿಭಾಗ ಮುಖ್ಯಸ್ಥರು ಸೂಕ್ತ ವಿವರಗಳೊಂದಿಗೆ ಶಿಫಾರಸ್ಸು ಮಾಡಿ ಕೇಂದ್ರ ಕಛೇರಿ ಮಟ್ಟದ ಸಮಿತಿಗೆ ಕಳುಹಿಸಿಕೊಡುವುದು.



Scanned by CamScanner

ಸದರಿ ಸಮಿತಿಯು ಈಗಾಗಲೇ ನಿಗಮದಲ್ಲಿ ಪರ್ಯಾಯ/ಲಘು/ಕೆಳದರ್ಜೆಯ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ವಿವರಗಳನ್ನು ವಿಭಾಗದಿಂದ ಅರ್ಜಿ ಹಾಗೂ ಪೂರಕ ದಾಖಲೆಗಳನ್ನು ಪಡೆದು ಪರಿಶೀಲಿಸಿ, ನೌಕರರನ್ನು ಪರ್ಯಾಯ/ಲಘು/ಕೆಳದರ್ಜೆಯ ಹುದ್ದೆಗೆ ನಿಯೋಜಿಸಲು ನಿಯಮಾನುಸಾರ ಸೂಕ್ತ ಶಿಫಾರಸ್ಸು ಮಾಡುವುದು.

ಇನ್ನು ಮುಂದೆ ಪರ್ಯಾಯ/ಲಘು/ಕೆಳದರ್ಜೆಯ ಹುದ್ದೆ ಕೋರುವ ನೌಕರರ ವಿವರಗಳೊಂದಿಗೆ ವಿಭಾಗದಿಂದ ಕಳುಹಿಸುವ ಅರ್ಜಿ ಹಾಗೂ ಪೂರಕ ದಾಖಲೆಗಳನ್ನು ಪರಿಶೀಲಿಸಿ, ಶಿಫಾರಸ್ಸು ಮಾಡುವುದು. ನಂತರ ಸಮಿತಿಯ ಸಂಚಾಲಕರು ಸಂಬಂಧಪಟ್ಟ ವಿಭಾಗ ಮುಖ್ಯಸ್ಥರ ಮೂಲಕ ಸಮಿತಿಯ ಶಿಫಾರಸ್ಸಿನಂತೆ ಕ್ರಮವಹಿಸುವುದು.

ಉಳಿದಂತೆ, ಸುತ್ತೋಲೆ ಸಂಖ್ಯೆ:1491, ದಿನಾಂಕ: 10-05-2013 ರ ನಿರ್ದೇಶನಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಈ ಸುತ್ತೋಲೆಯು ತಕ್ಷಣದಿಂದ ಜಾರಿಗೆ ಬರುತ್ತದೆ.

(ಎಸ್.ಆರ್.ಉಮಾಶಂಕರ್)
ವ್ಯವಸ್ಥಾಪಕ ನಿರ್ದೇಶಕರು

**ಪ್ರತಿ ಮಾಹಿತಿಗಾಗಿ:**

1. ಅಧ್ಯಕ್ಷರು/ಉಪಾಧ್ಯಕ್ಷರು, ಕರಾರಸಾ ನಿಗಮ ರವರ ಆಪ್ತ ಕಾರ್ಯದರ್ಶಿಯವರಿಗೆ.
2. ವ್ಯವಸ್ಥಾಪಕ ನಿರ್ದೇಶಕರು, ಬೆಂಮಸಾಸಂಸ್ಥೆ/ವಾಕರಸಾಸಂಸ್ಥೆ/ಈಕರಸಾಸಂಸ್ಥೆ ರವರಿಗೆ.
3. ನಿರ್ದೇಶಕರು(ಸಿ:ಪ)/ ನಿರ್ದೇಶಕರು(ಭ:ಜಾ), ಕರಾರಸಾ ನಿಗಮ, ರವರಿಗೆ.

**ಪ್ರತಿ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:**

4. ಎಲ್ಲಾ ಇಲಾಖಾ ಮುಖ್ಯಸ್ಥರುಗಳು/ಎಲ್ಲಾ ವಿಭಾಗೀಯ ಮುಖ್ಯಸ್ಥರು/ಕಾರ್ಯ ವ್ಯವಸ್ಥಾಪಕರು/ ಪ್ರಾಂಶುಪಾಲರು, ಕರಾರಸಾ ನಿಗಮ ರವರುಗಳಿಗೆ.
5. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ನೇಮಕ), ಕರಾರಸಾ ನಿಗಮ/ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂಮಸಾ ಸಂಸ್ಥೆ/ವಾಕರಸಾ ಸಂಸ್ಥೆ/ಈಕರಸಾ ಸಂಸ್ಥೆ ರವರಿಗೆ.
6. ಉಪ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ.
7. ಮುಖ್ಯ ಭದ್ರತಾ ಮತ್ತು ಜಾಗೃತಾಧಿಕಾರಿ, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ಕೇಂದ್ರ ಕಛೇರಿಯ ಸೂಚನಾ ಫಲಕದಲ್ಲಿ ಪ್ರದರ್ಶಿಸಿ, ಪ್ರದರ್ಶಿತಗೊಂಡ ಬಗ್ಗೆ ಪ್ರಧಾನ ವ್ಯವಸ್ಥಾಪಕರು (ಸಿಬ್ಬಂದಿ) ರವರಿಗೆ ವರದಿ ಸಲ್ಲಿಸುವುದು.
8. ಮುಖ್ಯ ಗಣಕ ವ್ಯವಸ್ಥಾಪಕರು, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ನಿಗಮದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
9. ಪ್ರಧಾನ ಕಛೇರಿ ಪತ್ರ ಕಡತ.

Scanned by CamScanner